ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಸಣ್ಣ ರಸ್ತೆಗಳಿಗೆ (ಕನ್ಸರ್ವೆನ್ಸ್) ಗೇಟ್ ಅಳವಡಿಸಿರುವುದರ ಬಗ್ಗೆ

ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

345(473) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಮುಖ್ಯ ರಸ್ತೆಗಳ ಹಿಂಭಾಗದಲ್ಲಿ ಸಣ್ಣ ಸಣ್ಣ ರಸ್ತೆಗಳಿದ್ದು (ಹಿಂದೆ ಕನ್ಸರ್ವೆನ್ಸ್ ರಸ್ತೆ ಎಂದು ಕರೆಯಲಾಗುತ್ತಿತ್ತು) ಅವುಗಳಿಗೆ ಕಬ್ಬಿಣದ ಗೇಟುಗಳನ್ನು ಯಾವ ಕಾರಣಕ್ಕೆ ಹಾಗೂ ಯಾರು ಹಾಕಿಸಿದ್ದಾರೆ;

(ಆ) ಈ ಸಣ್ಣ ರಸ್ತೆಗಳಲ್ಲಿ ಅನೇಕ ಮನೆಗಳಿದ್ದು ಅಲ್ಲಿನ ನಿವಾಸಿಗಳು ಓಡಾಡಲು ಅವಕಾಶವಿದ್ದು ರಾತ್ರಿ ವೇಳೆ ಗೇಟುಗಳನ್ನು ಮುಚ್ಚುವುದರಿಂದ ಅಲ್ಲಿನ ನಿವಾಸಿಗಳಿಗೆ ತೊಂದರೆಯಾಗುದಿಲ್ಲವೇ; ಈ ನಿರ್ಧಾರವನ್ನು ತೆಗೆದುಕೊಳ್ಳುವವರು ಯಾರು ;

(ಇ) ಮುಖ್ಯ ರಸ್ತೆಯಲ್ಲಿ ವಾಸ ಮಾಡುವ ಮನೆ ಮಾಲೀಕರು ತಮ್ಮ ವಾಹನಗಳನ್ನು ನಿಲ್ಲಿಸಿಕೊಂಡು ಗೇಟಿಗೆ ಬೀಗ ಹಾಕಿಕೊಂಡು ತಮ್ಮ ಸ್ವಂತ ಆಸ್ತಿಯಂತೆ ಉಪಯೋಗಿಸುತ್ತಿದ್ದು, ಇದನ್ನು ತಪ್ಪಿಸಿ ಸಾರ್ವಜನಿಕ ರಸ್ತೆಯನ್ನು ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಲು ತೆಗೆದುಕೊಂಡ ಕ್ರಮಗಳೇನು ?